4. ಶಾಸನ ರಚನೆ

(ಅ) ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕ 2007

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :– 2007 ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ " 2007 ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :– 2007 ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಛೇರ್ಮನ್ :– ವಿಧೇಯಕವನ್ನು ಮಂಡಿಸಲಾಗಿದೆ.

ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2007 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :– 2007 ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ " 2007 ರ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವದು"